**FEBRUARY 21, 2026**

**AKASHAVANI - DHARWAD**

**PRADESH SAAMACHARA (KANNADA) 12 PM**

<><><>

**ಮಾನವ–ಹುಲಿ ಸಂಘರ್ಷದ ಹಿನ್ನೆಲೆಯಲ್ಲಿ** ಕಳೆದ ನವೆಂಬರ್ 7 ರಂದು ಸ್ಥಗಿತಗೊಳಿಸಲಾಗಿದ್ದ ಸಫಾರಿಯನ್ನು ಷರತ್ತುಬದ್ಧವಾಗಿ ಪುನರಾರಂಭಿಸಲು ನಿರ್ಧರಿಸಲಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಖಾತೆ ಸಚಿವ ಈಶ್ವರ ಖಂಡ್ರೆ ಹೇಳಿದ್ದಾರೆ. ಮೈಸೂರಿನಲ್ಲಿ ಮೈಸೂರು, ಕೊಡಗು ಮತ್ತು ಚಾಮರಾಜನಗರ ವಿಭಾಗದ ಅಧಿಕಾರಿಗಳೊಂದಿಗೆ ನಡೆಸಿದ ಸಭೆಯಲ್ಲಿ ಮಾತನಾಡಿದ ಅವರು, ಆದೇಶದಲ್ಲಿರುವ ಷರತ್ತುಗಳನ್ನು ಉಲ್ಲಂಘಿಸಿದರೆ, ಸಂಬಂಧಿಸಿದ ಅಧಿಕಾರಿಗಳನ್ನೇ ಹೊಣೆ ಮಾಡಲಾಗುವುದು ಎಂದರು. ಬಂಡಿಪುರ ಮತ್ತು ನಾಗರಹೊಳೆ ಅರಣ್ಯ ಪ್ರದೇಶದಲ್ಲಿ ಮಾನವ–ವನ್ಯಜೀವಿ ಸಂಘರ್ಷ ಇರುವ ಪ್ರದೇಶವನ್ನು ಗುರುತಿಸಬೇಕು. ಆ ಪ್ರದೇಶದಲ್ಲಿ ಗಸ್ತು ಹೆಚ್ಚಿಸಬೇಕು. ವನ್ಯಜೀವಿಗಳು ವಸತಿ ಪ್ರದೇಶಕ್ಕೆ ಬಾರದಂತೆ, ಜೀವಹಾನಿ, ಬೆಳೆ ಹಾನಿ ಮಾಡದಂತೆ ಎಚ್ಚರಿಕೆ ವಹಿಸಬೇಕು. ಬಂಡೀಪುರ ಅರಣ್ಯದ ಗಡಿಯಲ್ಲಿ 100 ಕಿಲೋ ಮೀಟರ್ ಅತ್ಯಂತ ಸೂಕ್ಷ್ಮ ಪ್ರದೇಶವಾಗಿದ್ದು, ಅಲ್ಲಿ 5 ಕಿಲೋ ಮೀಟರ್‌ಗೆ ಒಂದರಂತೆ 25 ಶಿಬಿರ ನಿರ್ಮಿಸಿ ಪ್ರತಿ ಶಿಬಿರದಲ್ಲಿ ಸ್ಥಳೀಯರನ್ನು ಕಾಡಿನ ಮಿತ್ರ’ ಎಂದು ನೇಮಕ ಮಾಡಿ, ವನ್ಯಜೀವಿಗಳ ಚಲನವಲನದ ಬಗ್ಗೆ ನಿಗಾ ಇಡಬೇಕು. ಥರ್ಮಲ್ ಡ್ರೋನ್, ವಾಹನ ಸೇರಿದಂತೆ ಯಾವುದೇ ಸೌಲಭ್ಯ ಬೇಕಿದ್ದರೂ ಲಿಖಿತವಾಗಿ ಪ್ರಸ್ತಾವ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ವನ್ಯಜೀವಿಗಳ ರಕ್ಷಣೆಯ ಜೊತೆಗೆ ಕಾಡಿನಂಚಿನಲ್ಲಿ ವಾಸಿಸುತ್ತಿರುವ ನಿವಾಸಿಗಳ ಜೀವ ರಕ್ಷಣೆಯೂ ಅರಣ್ಯ ಇಲಾಖೆಯ ಪ್ರಥಮ ಆದ್ಯತೆ ಆಗಿದೆ. ಇದರ ಜೊತೆಗೆ ಬೆಳೆ ರಕ್ಷಣೆಗೂ ಒತ್ತು ನೀಡಬೇಕು. ಸಫಾರಿಯಿಂದ ಬರುವ ಆದಾಯದಲ್ಲಿ ಶೇಕಡ 35 ರಷ್ಟು ಹಣವನ್ನು ಅರಣ್ಯದಂಚಿನ ವಸತಿ ಪ್ರದೇಶಗಳಲ್ಲಿನ ಯುವ ಜನರಿಗೆ ಕೌಶಲ್ಯ ತರಬೇತಿಗೆ, ಜಾನುವಾರುಗಳ ಮೇವಿಗೆ, ಮಕ್ಕಳ ಶಿಕ್ಷಣಕ್ಕೆ ವಿನಿಯೋಗಿಸಬೇಕು ಎಂದು ತಿಳಿಸಿದರು.

<><><>

**ರಾಜ್ಯದಲ್ಲಿ ಪಂಚ ಗ್ಯಾರಂಟಿ** ಯೋಜನೆಗಳ ಪರಿಣಾಮಕಾರಿ ಅನುಷ್ಠಾನದಿಂದ ಹೊಸ ದಾಖಲೆ ಸೃಷ್ಟಿಸಲಾಗಿದೆ. ಜನ ಸಾಮಾನ್ಯರ ಬದುಕಿನಲ್ಲಿ ಬದಲಾವಣೆ ತರುವ ಉದ್ದೇಶದಿಂದ ಜಾರಿಗೊಳಿಸಲಾದ ಯೋಜನೆಗಳು, ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲೂ ವ್ಯಾಪಕ ಪರಿಣಾಮ ಬೀರಿವೆ ಎಂದು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್ ಹೇಳಿದ್ದಾರೆ. ಕಲಘಟಗಿ ಪಟ್ಟಣ ಪಂಚಾಯಿತಿ ಮುಂಭಾಗದಲ್ಲಿ, ಪಂಚ ಗ್ಯಾರಂಟಿ ಯೋಜನೆಗಳ ಕ್ಷೇತ್ರ ಪ್ರಚಾರದ ಎಲ್.ಇ.ಡಿ ವಾಹನಕ್ಕೆ ಚಾಲನೆ ನೀಡಿ ನಂತರ ಮಾತನಾಡಿದ ಅವರು, ಜಿಲ್ಲೆಯ 20 ಹಳ್ಳಿಗಳಿಗೆ ತೆರಳಲಿರುವ ವಾಹನವು, ಗ್ಯಾರಂಟಿ ಯೋಜನೆಗಳ ಮಾಹಿತಿಯನ್ನು ಜನರಿಗೆ ತಲುಪಿಸಲಿದೆ. ಇದುವರೆಗೆ ಗ್ಯಾರಂಟಿ ಯೋಜನೆಗಳಡಿ, 3 ಸಾವಿರದ 485 ಕೋಟಿ ರೂಪಾಯಿ ಮೊತ್ತವನ್ನು ವಿನಿಯೋಗಿಸಲಾಗಿದೆ ಎಂದರು.

<><><>

**ಪ್ರಧಾನಮಂತ್ರಿ ನರೇಂದ್ರ ಮೋದಿ** ಅವರ ನೇತೃತ್ವದಲ್ಲಿ ಭಾರತ ಇಂದು ಬಹುದೊಡ್ಡ ಪರಿವರ್ತನೆ ಕಾಣುತ್ತಿದೆ. ದೇಶದೆಲ್ಲೆಡೆ ಧಾರ್ಮಿಕ ಹಾಗೂ ಸಾಂಸ್ಕೃತಿಕ ಪುನರುತ್ಥಾನವಾಗುತ್ತಿದೆ ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಖಾತೆ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ. ರಾಯಚೂರು ಜಿಲ್ಲೆ ಲಿಂಗಸಗೂರಿನ ಗೆಜ್ಜಲಗಟ್ಟಾದ ವೀರನಾಗಮ್ಮ ದೇವಿ ನೂತನ ದೇವಾಲಯ ಲೋಕಾರ್ಪಣೆ ಹಾಗೂ ಬ್ರಹ್ಮ ಕಲಶೋತ್ಸವ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಭಾರತ ಸಾಂಸ್ಕೃತಿಕ ನೆಲೆಯುಳ್ಳ ರಾಷ್ಟ್ರವಾಗಿದ್ದು, ಜ್ಞಾನ, ವಿಜ್ಞಾನ, ಧರ್ಮ, ಸಂಪ್ರದಾಯದ ಪರಿಕಲ್ಪನೆ ನಮ್ಮ ದೇಶದಲ್ಲಿ ಅಗಾಧವಾಗಿದೆ. ಹೀಗಾಗಿ ಭಾರತದ ಹಿರಿಮೆಯನ್ನು ಇಂದು ವಿಶ್ವವೇ ಕೊಂಡಾಡುತ್ತಿದೆ ಎಂದರು.

<><><>

**ಉತ್ತರಕನ್ನಡ ಜಿಲ್ಲೆಯ ಕಾರವಾರ** ತಾಲ್ಲೂಕಿನ ಬೇಳೂರು ಹಾಗೂ ಅಂಕೋಲಾ ತಾಲ್ಲೂಕಿನ ಬೆಳಸೆ ಗ್ರಾಮಗಳನ್ನು ಕರ್ನಾಟಕ ರಾಜ್ಯ ಮಾರುಕಟ್ಟೆ ಸಂವಹನ ಮತ್ತು ಜಾಹೀರಾತು ಲಿಮಿಟೆಡ್ ವತಿಯಿಂದ ಸ್ಮಾರ್ಟ್ ವಿಲೇಜ್ ಪೈಲಟ್ ಯೋಜನೆಗೆ ಆಯ್ಕೆ ಮಾಡಲಾಗಿದೆ ಎಂದು ಕೆ.ಎಸ್.ಎಂ.ಸಿ.ಎ ಅಧ್ಯಕ್ಷರೂ ಆಗಿರುವ ಶಾಸಕ ಸತೀಶ ಸೈಲ್ ತಿಳಿಸಿದ್ದಾರೆ. ಗ್ರಾಮೀಣ ಪ್ರದೇಶಗಳಲ್ಲಿ ಸ್ಥಳೀಯ ಉದ್ಯಮಶೀಲತೆಯನ್ನು ಉತ್ತೇಜಿಸುವುದರ ಜೊತೆಗೆ ಉದ್ಯೋಗಾವಕಾಶಗಳನ್ನು ಸೃಷ್ಟಿಸುವುದು ಹಾಗೂ ಗ್ರಾಮೀಣ ಉತ್ಪನ್ನಗಳಿಗೆ ಸಂಘಟಿತ ಮಾರುಕಟ್ಟೆ ಪ್ರವೇಶ ಒದಗಿಸಿ, ಆರ್ಥಿಕ ಸ್ವಾವಲಂಬನೆ ಸಾಧಿಸುವುದು ಈ ಯೋಜನೆಯ ಮುಖ್ಯ ಉದ್ದೇಶ ಎಂದರು. ಪೈಲಟ್ ಯೋಜನೆಯಡಿ, ಕೃಷಿ ಮತ್ತು ಸಹಾಯಕ ಚಟುವಟಿಕೆಗಳು, ಮೀನುಗಾರಿಕೆ, ಪರಂಪರಾಗತ ಉತ್ಪನ್ನಗಳು, ಹಸ್ತ ಕರಕುಶಲ ವಸ್ತುಗಳು ಹಾಗೂ ಮಹಿಳಾ ಸ್ವಸಹಾಯ ಸಂಘಗಳ ಆಧಾರಿತ ಉದ್ಯಮಗಳನ್ನು ಗುರುತಿಸಿ, ಬೆಂಬಲ ನೀಡಲಾಗುವುದು ಎಂದು ತಿಳಿಸಿದರು.

**<><><>**

**ಮಂಗಳೂರು ಕರಾವಳಿ ಉತ್ಸವ ಮೈದಾನದಲ್ಲಿ,** ಈ ತಿಂಗಳ 28 ರ ವರೆಗೆ ಆಯೋಜಿಸಲಾದ, ರಾಷ್ಟ್ರಮಟ್ಟದ ಕರಕುಶಲ ವಸ್ತುಗಳ ಪ್ರದರ್ಶನ ಹಾಗೂ ಮಾರಾಟ 'ಸರಸ್ ಮೇಳ' ಕ್ಕೆ ವಿಧಾನಸಭಾಧ್ಯಕ್ಷ ಯು.ಟಿ ಖಾದರ್ ಚಾಲನೆ ನೀಡಿದರು. ಸರಸ್ ಮೇಳವು, ಗ್ರಾಮೀಣ ಮಹಿಳೆಯರಿಗೆ ಶಕ್ತಿ ತುಂಬುವ ವೇದಿಕೆಯಾಗಿದೆ. ಸ್ವ ಸಹಾಯ ಸಂಘಗಳ ಶಕ್ತಿ, ಸ್ವಾವಲಂಬನೆಗೆ ದಾರಿಯಾಗಿದೆ ಎಂದು ಅವರು ಬಣ್ಣಿಸಿದರು.

**<><><>**

**ಧಾರವಾಡ ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ** ಇಲಾಖೆಯು, ಸಮಾಜ ಕಲ್ಯಾಣ ಇಲಾಖೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಸಹಕಾರದೊಂದಿಗೆ, ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪ ಯೋಜನೆಯಡಿ, ವಸತಿ ನಿಲಯದ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಸಂಗೀತ ಕಲಾ ತರಬೇತಿಯ ಸಮಾರೋಪ ಸಭಾರಂಭವನ್ನು ನಾಳೆ ಧಾರವಾಡ ರಂಗಾಯಣದ ಸುವರ್ಣ ಸಾಂಸ್ಕೃತಿಕ ಸಮುಚ್ಛಯ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಸ್ವರ ಸಾಮ್ರಾಟ ಪಂಡಿತ ಬಸವರಾಜ ರಾಜಗುರು ರಾಷ್ಟ್ರೀಯ ಸ್ಮಾರಕ ಟ್ರಸ್ಟನ ಅಧ್ಯಕ್ಷರಾದ ಪಂಡಿತ ಕೈವಲ್ಯಕುಮಾರ ಗುರವ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸಲಿದ್ದು, ಚಿತ್ರಕಲಾ ಶಿಲ್ಪಿ ಶ್ರೀ ಡಿ.ವಿ.ಹಾಲಭಾವಿ ರಾಷ್ಟ್ರೀಯ ಸ್ಮಾರಕ ಟ್ರಸ್ಟನ ಅಧ್ಯಕ್ಷರಾದ ಬಿ.ಮಾರುತಿ ಅಧ್ಯಕ್ಷತೆವಹಿಸಲಿದ್ದಾರೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕರಾದ ಕೆ.ಎಚ್.ಚನ್ನೂರ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ಜಗದೀಶ ಹೆಬ್ಬಳ್ಳಿ, ಸಹಾಯಕ ನಿರ್ದೇಶಕರಾದ ಎಂ.ಬಿ.ಸಣ್ಣೇರ ಅತಿಥಿಗಳಾಗಿ ಆಗಮಿಸಲಿದ್ದಾರೆ.

**<><><>**

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**
**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ.**

**<><><>**